**ಸಿ ಸಿ ನಂ. 3679-2018**

ಪಿಡಬ್ಲೂಃ 2
ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.
ದಿನಾಂಕಃ 09-03-2026

ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಃ

1. ನ್ಯಾಯಾಲಯುದ ಮುಂದಿರುವ ಆರೋಪಿಯನ್ನು ಈ ಹಿಂದೆ ನೋಡಿಲ್ಲ. ನನಗೆ ಈ ಅಫಘಾತದ ಬಗ್ಗೆ ಯಾವುದೆ ಮಾಹಿತಿ ಇಲ್ಲ ಎಂದರೆ ಸರಿ. ನಾನು ಚಾಸಾ 1 ರವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನೀಡುತ್ತಿದ್ದೇನೆ ಎಂದರೆ ಸರಿಯಲ್ಲ. ಮೃತ ಮೋಹನ್ ನನ್ನ ಮಾವನಾಗಿರುವ ಕಾರಣ ಸುಳ್ಳು ಸಾಕ್ಷ್ಯ ನೀಡುತ್ತಿದ್ದೇನೆ ಎಂದರೆ ಸರಿಯಲ್ಲ. ಮೃತ ಮೋಹನ್ ನನ್ನ ಮಾವ ಆಗಬೇಕು ಎಂದರೆ ಸರಿ. ಆರೋಪಿ ಆದಿನ ಯಾವುದೇ ವಾಹನ ಚಾಲನೆ ಮಾಡುತ್ತಿರಲಿಲ್ಲ ಎಂದರೆ ನನಗೆ ಗೊತ್ತಿಲ್ಲ ನಾನು ಆಫಘಾತ ಆದ ಮೇಲೆ ನಾನು ಸ್ಥಳಕ್ಕೆ ಹೋಗಿರುತ್ತೇನೆ. ನಾನು ಯಾರನ್ನೂ ಆಸ್ಪತೇ್ರಗೆ ಕರೆದುಕೊಂಡು ಹೋಗಿಲ್ಲ ಎಂದರೆ ನನಗೆ ಎನೂ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ವಿಚಾರ ಗೊತ್ತಿಲ್ಲ ಎಂದರೆ ಸರಿ.

ಮರು ವಿಚಾರಣೆ ಎಪಿಪಿ ರವರಿಂದ.

ನಾನು ಈ ಪ್ರಕರಣವನ್ನು ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಮೃತರ ಕುಟುಂಬದವರು ಪರಿಹಾರಕ್ಕಾಗಿ ದಾವೆ ದಾಖಲಿಸಿಕೊಂಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಪ್ರಕರಣದಲ್ಲ್ ಪರಿಹಾರ ಹಣ ಪಡೆದುಕೊಂಡಿರಟುವುದರಿಂದ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಈ ರೀತಿ ಸಾಕ್ಷ್ಯ ನುಡಿಯಲು ಯಾರು ಒತ್ತಡ ಮತ್ತು ಬೆದರಿಕೆ ಹಾಕಿಲ್ಲ.

(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಎ. ಒಪ್ಪಲಾಗಿದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ದೇವನಹಳ್ಳಿ